ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 237 ಬೆಮಪ್ರಾ 2009

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 19–09–2009.

ಸುತ್ತೋಲೆ

ವಿಷಯ: ನಗರಾಭಿವೃದ್ಧಿ ಪ್ರಾಧಿಕಾರಗಳು, ಯೋಜನಾ ಪ್ರಾಧಿಕಾರಗಳು ಹಾಗೂ ಸ್ಥಳೀಯ ಸಂಸ್ಥೆಗಳು ಧಾರ್ಮಿಕ ಉಪಯೋಗದ ಮತ್ತು ಶಾಲಾ ಕಾಲೇಜು ಕಟ್ಟಡಗಳನ್ನು ಅನುಮತಿಸುವಾಗ ಅನುಸರಿಸುವ ಕ್ರಮದ ಬಗ್ಗೆ

* * * * *

ರಾಜ್ಯದ ನಗರ / ಪಟ್ಟಣಗಳ ಅನುಮೋದಿತ ಮಹಾಯೋಜನೆಗಳ ವಲಯ ನಿಯಮಾವಳಿಗಳನ್ವಯ ವಿವಿಧ ವಲಯಗಳಲ್ಲಿ ಧಾರ್ಮಿಕ ಉಪಯೋಗದ ಹಾಗೂ ಶಾಲಾ ಕಾಲೇಜು ಕಟ್ಟಡಗಳನ್ನು ಅನುಮತಿಸಲು ಸಾಮಾನ್ಯ ಅಥವಾ ವಿಶೇಷ ಸಂದರ್ಭಗಳಲ್ಲಿ ಪ್ರಾಧಿಕಾರಕ್ಕೆ ಅವಕಾಶವಿದ್ದರೂ ಸಹ, ಅಂತಹ ಉಪಯೋಗಗಳಿಗೆ ಅನುಮತಿ ನೀಡುವಾಗ ಪ್ರಶ್ನಿತ ನಿವೇಶನಗಳಿರುವ ಪ್ರದೇಶದ ಸೂಕ್ಷ್ಮತೆಯನ್ನು ಸಹ ಪರಿಗಣಿಸುವುದು ಅವಶ್ಯಕವಾಗಿದೆ. ಇಂತಹ ಅನುಮತಿ ನೀಡಿದ ಕೆಲವು ಪ್ರಕರಣಗಳು ಕೋಮು ಗಲಭೆಗೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ನಗರಾಭಿವೃದ್ಧಿ ಪ್ರಾಧಿಕಾರಗಳು, ಯೋಜನಾ ಪ್ರಾಧಿಕಾರಗಳು, ಪುರಸಭಾ ಯೋಜನಾ ಪ್ರಾಧಿಕಾರಗಳು ಹಾಗೂ ಸ್ಥಳೀಯ ಸಂಸ್ಥೆಗಳು ಇಂತಹ ಸಂದರ್ಭಗಳಲ್ಲಿ ಜವಾಬ್ದಾರಿಯುತ ಕ್ರಮ ಕೈಗೊಳ್ಳುವುದು ಅವಶ್ಯಕವಾಗಿರುತ್ತದೆ. ಅಂತಹ ಕಟ್ಟಡಗಳನ್ನು ನಿರ್ಮಿಸಲು ಅನುಮತಿ ನೀಡುವ ಮೊದಲು ಕನಿಷ್ಠ 15 ದಿವಸಗಳ ಕಾಲಾವಕಾಶ ನೀಡಿ, ಸ್ಥಳೀಯ 2 ದಿನಪತ್ರಿಕೆಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಣೆ ನೀಡುವುದು ಹಾಗೂ ಅದೇ ಸಮಯದಲ್ಲಿ ಪ್ರಶ್ನಿತ ನಿವೇಶನದಲ್ಲಿ ಉದ್ದೇಶಿತ ಕಟ್ಟಡ ನಿರ್ಮಾಣದ ಬಗ್ಗೆ ಫಲಕ ಹಾಕತಕ್ಕದ್ದು. ನಂತರ ಸಾರ್ವಜನಿಕರಿಂದ ಸ್ವೀಕರಿಸಿದ ಪ್ರತಿಕ್ರಿಯೆಯೊಂದಿಗೆ ಸಂಬಂಧಪಟ್ಟ ಪ್ರಾಧಿಕಾರ / ಕೌನ್ಸಿಲ್‌ನ ಮುಂದೆ ಪ್ರಸ್ತಾವನೆ ತಂದು ಸಭೆಯು ಕೈಗೊಳ್ಳುವ ನಿರ್ಣಯಕ್ಕೆ ಅನುಗುಣವಾಗಿ ಕ್ರಮ ಜರುಗಿಸಲು ಈ ಮೂಲಕ ತಿಳಿಯಪಡಿಸಿದೆ.

(ಸಿ.ಟಿ. ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ

ಗೆ,

1) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು
2) ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು
3) ಎಲ್ಲಾ ಜಿಲ್ಲಾಧಿಕಾರಿಗಳಿಗೆ,
4) ಎಲ್ಲಾ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ
5) ಎಲ್ಲಾ ಸದಸ್ಯ ಕಾರ್ಯದರ್ಶಿಗಳು, ಸ್ಥಳೀಯ ಯೋಜನಾ ಪ್ರಾಧಿಕಾರಗಳು / ಪುರಸಭೆ ಯೋಜನಾ ಪ್ರಾಧಿಕಾರಗಳು
6) ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಶಾಖಾ ಕಛೇರಿಗಳು
7) ಶಾಖಾ ರಕ್ಷಾ ಕಡತ
8) ಹೆಚ್ಚುವರಿ ಪ್ರತಿಗಳು